# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಭಾರತ ಸರ್ಕಾರವು ಕೆಲವು ಕಾರ್ಯಕ್ರಮಗಳನ್ನು ಡಿ.ಬಿ.ಟಿ ಯೋಜನೆಯ ಮೂಲಕ ಅನುಷ್ಠಾನಗೊಳಿಸಲು ಪ್ರತಿಯೊಂದು ಕಾರ್ಯಕ್ರಮಕ್ಕೂ ಜಿಲ್ಲಾ ಮಟ್ಟದ ಮತ್ತು ರಾಜ್ಯಮಟ್ಟದ ನೋಡಲ್ ಅಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಪತ್ರ ಸಂಖ್ಯೆ: ಪವಕನಿ:ಇಡಿ-4:ಸಿಆರ್:5:2012-14 ದಿ:18.07.2013

**ಪ್ರಸ್ತಾವನೆ:-**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರು ಸಮಾಜ ಕಲ್ಯಾಣ ವ್ಯಾಪ್ತಿಯಲ್ಲಿ ಭಾರತ ಸರ್ಕಾರದ ವಿವಿಧ ಮಾದರಿಯ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳನ್ನು ಡಿ.ಬಿ.ಟಿ ಯೋಜನೆಯ ಮೂಲಕ ಅನುಷ್ಠಾನಗೊಳಿಸುವ ಸಂಬಂಧ 2012-13ನೇ ಸಾಲಿನಲ್ಲಿ ರಾಜ್ಯದ ಮೈಸೂರು, ತುಮಕೂರು ಮತ್ತು ಧಾರವಾಡ ಜಿಲ್ಲೆಗಳನ್ನು ಪ್ರಾಯೋಗಿಕವಾಗಿ ಆಯ್ಕೆ ಮಾಡಿಕೊಳ್ಳಲಾಗಿತ್ತು. ಭಾರತ ಸರ್ಕಾರವು ಈ ಕಾರ್ಯಕ್ರಮಗಳನ್ನು 2013-14ನೇ ಸಾಲಿನಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ವಿಸ್ತರಿಸಿದ್ದು, ಈ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ಪ್ರತಿಯೊಂದು ಕಾರ್ಯಕ್ರಮಕ್ಕೂ ರಾಜ್ಯಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಿ ವರದಿ ಕಳುಹಿಸಿಕೊಡುವಂತೆ ತಿಳಿಸಿದ್ದು, ಸದರಿ ಕಾರ್ಯಕ್ರಮಗಳಡಿ ರಾಜ್ಯ ಮಟ್ಟದ ಹಾಗೂ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ:ಸಕಇ 162 ಪವಯೋ 2013, ಬೆಂಗಳೂರು
## ದಿನಾಂಕ: 21-8-2013

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ 2013-14ನೇ ಸಾಲಿನಿಂದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಡಿ ನೀಡಲಾಗುವ ಭಾರತ ಸರ್ಕಾರದ ವಿವಿಧ ಮಾದರಿಯ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳನ್ನು ಡಿ.ಬಿ.ಟಿ ಯೋಜನೆಯ ಮೂಲಕ ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಿ ಅನುಷ್ಠಾನಗೊಳಿಸಬೇಕಾಗಿರುವುದರಿಂದ, ಈ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ರಾಜ್ಯಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ಈ ಕೆಳಕಂಡಂತೆ ನೇಮಿಸಿ ಆದೇಶಿಸಿದೆ.

| Sl No. | Programmes | State Level Nodal Officers | District Level Nodal Officers |
|---|---|---|---|
| 1 | Post-Matric scholarship scheme for the ST students. | Deputy Director (Edn) O/o the Director, Scheduled Tribes Welfare Dept, Bangalore. | District Social Welfare Officer/District Tribal Welfare Officer/Project co ordinator, ITDP/of the concerned districts. |
| 2 | Pre-Matric scholarship scheme for the ST students studying in class IX & X | | |

ಸದರಿ ನೋಡಲ್ ಅಧಿಕಾರಿಗಳು ಪ್ರತಿಯೊಂದು ಕಾರ್ಯಕ್ರಮದ ಫಲಾನುಭವಿಗಳ ವಿವರಗಳು ಸರಿಯಾಗಿರುತ್ತವೆ ಎಂದು ಖಾತರಿಪಡಿಸಿಕೊಂಡು, ಭಾರತ ಸರ್ಕಾರವು ರಾಜ್ಯ ಸರ್ಕಾರದಿಂದ ಧೃಢೀಕರಣವಾಗಿ ಬಂದಂತಹ ವಿವರಗಳನ್ನೊಳಗೊಂಡ ಮಾಹಿತಿ ಆಧಾರದ ಮೇಲೆ ಡಿ.ಬಿ.ಟಿ. ಮೂಲಕ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನಿಗದಿತ ಮೊತ್ತವನ್ನು ಜಮಾ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

**(ಎನ್. ನರಸಿಂಹಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ.

<u>ಇವರಿಗೆ:</u>

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಗಳು.
4. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
5. ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು,
6. ಎಲ್ಲಾ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು, {ಕ್ರಮ ಸಂಖ್ಯೆ:3 ರಿಂದ 5ರವರೆಗೆ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ}

<u>ಪ್ರತಿ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
3. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.